# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತೈದನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಬುಧವಾರ, ದಿನಾಂಕ:15ನೇ ಡಿಸೆಂಬರ್, 2021**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಮೂರನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಮೂರನೆಯ ಪಟ್ಟಿ

## 02. ವರದಿಯನ್ನೊಪ್ಪಿಸುವುದು

**ಡಾ: ವೈ.ಎ. ನಾರಾಯಣಸ್ವಾಮಿ, (ಅಧ್ಯಕ್ಷರು, ಹಕ್ಕುಬಾಧ್ಯತಾ ಸಮಿತಿ)** ಅವರು ಕರ್ನಾಟಕ ವಿಧಾನ ಪರಿಷತ್ತಿನ ಹಕ್ಕುಬಾಧ್ಯತಾ ಸಮಿತಿಯ 98ನೇ ವರದಿಯನ್ನು ಒಪ್ಪಿಸುವುದು.

## 03. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಚರ್ಚೆ

| | |
|---|---|
| ಶ್ರೀ ಎಸ್.ಆರ್. ಪಾಟೀಲ್, ಮಾನ್ಯ ವಿರೋಧ ಪಕ್ಷದ ನಾಯಕರು ಹಾಗೂ ಶ್ರೀ ಎಂ.ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು ಅವರುಗಳು | ರಾಜ್ಯದಲ್ಲಿ ಇತ್ತೀಚೆಗೆ ಸಂಭವಿಸಿದ ಪ್ರವಾಹ ಮತ್ತು ಅತಿವೃಷ್ಟಿಯಿಂದ ರೈತರ ಬೆಳೆಗಳು ನಾಶವಾಗಿ, ಜಾನುವಾರುಗಳ ಪ್ರಾಣ ಹಾನಿಯಾಗಿ ಸಾರ್ವಜನಿಕ ಆಸ್ತಿಗಳಿಗೆ ಧಕ್ಕೆ ಉಂಟಾಗಿರುವ ಸಮಸ್ಯೆಗಳ ಕುರಿತು. |

## 04. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಬಿ.ಎಂ.ಫಾರೂಕ್** ಅವರು ದಕ್ಷಿಣ ಕನ್ನಡ ಜಿಲ್ಲೆಯ ಮುದಿಪು ಪಜಿರು ಗ್ರಾಮದ 500ಕ್ಕೂ ಹೆಚ್ಚು ರೈತರ ಜಮೀನುಗಳನ್ನು ವಿಶೇಷ ಆರ್ಥಿಕ ವಲಯಕ್ಕಾಗಿ ಕರ್ನಾಟಕ ಕೈಗಾರಿಕಾ ಮಂಡಳಿಯು ವಶಪಡಿಸಿಕೊಂಡು ಅವೈಜ್ಞಾನಿಕವಾಗಿ ಅಭಿವೃದ್ಧಿ ಪಡಿಸುತ್ತಿರುವುದರಿಂದ ರೈತರುಗಳು ತಮ್ಮ ತೋಟಗಳಿಗೆ ಓಡಾಡಲು ತೊಂದರೆ ಅನುಭವಿಸುತ್ತಿರುವ ಹಿನ್ನಲೆಯಲ್ಲಿ ಸದರಿ ಯೋಜನೆಯನ್ನು ಪುನಃ ಪರಿಶೀಲಿಸಿ ರಸ್ತೆ ನಿರ್ಮಿಸುವ ಮೂಲಕ ರೈತರುಗಳಿಗೆ ಅನುಕೂಲ ಮಾಡಿಕೊಡುವ ವಿಷಯದ ಕುರಿತು ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರ ಗಮನ ಸೆಳೆಯುವುದು.

..2..

02. **ಶ್ರೀಮತಿ ವೀಣಾ ಅಚ್ಚಯ್ಯ** ಅವರು ಪ್ರಾಕೃತಿಕ ವಿಕೋಪದಿಂದ ಕಾಫಿ ಬೆಳೆಗೆ ಆಗುತ್ತಿರುವ ನಷ್ಟಕ್ಕೆ ನ್ಯಾಯಸಮ್ಮತ ಪರಿಹಾರ ದೊರೆಯದೆ ಇರುವ ಕಾರಣ ಕಾಫಿ ಬೆಳೆಗಾರರು ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವ ವಿಷಯದ ಬಗ್ಗೆ ಮಾನ್ಯ ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರ ಗಮನ ಸೆಳೆಯುವುದು.

03. **ಶ್ರೀ ಯು.ಬಿ.ವೆಂಕಟೇಶ್** ಅವರು ಬೆಂಗಳೂರು ನಗರದ ಚಾಲುಕ್ಯ ವೃತ್ತದಿಂದ ದೇವನಹಳ್ಳಿ ಅಂತರ ರಾಷ್ಟ್ರೀಯ ವಿಮಾಣ ನಿಲ್ದಾಣಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಯ ಉದ್ದೇಶಿತ ಯೋಜನೆಯ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

04. **ಶ್ರೀ ಕೆ.ಎ. ತಿಪ್ಪೇಸ್ವಾಮಿ** ಅವರು ಆಹಾರ ಸುರಕ್ಷತೆ ಮತ್ತು ಮಾನದಂಡ ಕಾಯ್ದೆ 2006ನ್ನು ಜಾರಿಗೊಳಿಸಿ ರಾಜ್ಯದಲ್ಲಿ ನಡೆಯುವ ಆಹಾರ ಕಲಬೆರಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಸರ್ಕಾರ ವಿಫಲವಾಗಿರುವ ಕುರಿತು ಹಾಗೂ ರಾಜ್ಯದಲ್ಲಿ ತಯಾರಾಗುವ ಬೆಲ್ಲವು ರಾಸಾಯನಿಕ ವಸ್ತು ಮತ್ತು ಸಕ್ಕರೆ ಮಿಶ್ರಣದಿಂದ ಕೂಡಿರುವ ಕಾರಣದಿಂದ ಕಲಬೆರಕೆ ಬೆಲ್ಲವನ್ನು ಕೊಂಡುಕೊಳ್ಳಲು ಇತರೆ ರಾಜ್ಯಗಳು ತಿರಸ್ಕರಿಸುತ್ತಿರುವ ವಿಷಯದ ಕುರಿತು ಮಾನ್ಯ ಅರಣ್ಯ, ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರ ಗಮನ ಸೆಳೆಯುವುದು.

## 05. ನಿಯಮ 330ರ ಮೇರೆಗೆ

01. **ಶ್ರೀ ಸಿ.ಎಂ. ಇಬ್ರಾಹಿಂ** ಅವರು ರಾಜ್ಯದ ವಿವಿಧ ಇಲಾಖೆಗಳಲ್ಲಿ ಗುತ್ತಿಗೆ ಕಾಮಗಾರಿಗಳ ಮೊತ್ತದ ಶೇಕಡ 40ರಷ್ಟು ಮೊತ್ತ ಲಂಚದ ರೂಪದಲ್ಲಿ ವ್ಯಯವಾಗುತ್ತಿದ್ದು, ಭ್ರಷ್ಟಾಚಾರ ತಾಂಡವವಾಡುತ್ತಿರುವ ಕುರಿತು ಪ್ರಸ್ತಾಪಿಸುವುದು.

02. **ಶ್ರೀಯುತರುಗಳಾದ ಅರುಣ ಶಹಾಪೂರ, ಪುಟ್ಟಣ್ಣ ಮರಿತಿಬ್ಬೇಗೌಡ ಮತ್ತು ಕೆ ಟಿ ಶ್ರೀಕಂಠೇಗೌಡ** ಅವರುಗಳು 1995ರ ನಂತರ ಆರಂಭವಾದ ಅನುದಾನ ರಹಿತ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ವಿಷಯದ ಕುರಿತು ಪ್ರಸ್ತಾಪಿಸುವುದು.

03. **ಶ್ರೀ ಶಾಂತಾರಾಮ್ ಬುಡ್ನ** ಸಿದ್ದಿ ಅವರು ಮೈಸೂರು ಜಿಲ್ಲೆಯ ಹೆಚ್.ಡಿ.ಕೋಟೆ ತಾಲ್ಲೂಕಿನ ಡಿ.ಜಿ.ಗುಪ್ಪೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿನ ಬುಡಕಟ್ಟು ಜನರಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಿಲ್ಲದಿರುವ ಬಗ್ಗೆ ಪ್ರಸ್ತಾಪಿಸುವುದು.

04. **ಶ್ರೀ ಎಸ್.ಎಲ್. ಭೋಜೇಗೌಡ** ಅವರು ತಕರಾರು ಇರುವ ಜಮೀನುಗಳ ಪೋಡಿ ಮಾಡಿಕೊಡಲು ಮತ್ತು ದರಖಾಸ್ತು ಮುಖಾಂತರ ಮಂಜೂರಾದ ಜಮೀನುಗಳಿಗೆ ಏಕವ್ಯಕ್ತಿ ಪೋಡಿ ಮಾಡಿಕೊಡಲು ತಹಶೀಲ್ದಾರ್‌ರವರಿಗೆ ಅಧಿಕಾರವಿದ್ದರೂ ಸಹ ಕಡತಗಳನ್ನು ಎಡಿಎಲ್‌ಆರ್ ಮತ್ತು ಡಿಡಿಎಲ್‌ಆರ್ ರವರುಗಳಿಗೆ ಕಳುಹಿಸುತ್ತಿರುವ ಕಾರಣದಿಂದ ಅನಾವಶ್ಯಕ ವಿಳಂಬವಾಗುತ್ತಿದ್ದು, ಭೂ ದಾಖಲೆಗಳ ಕಚೇರಿಗಳಲ್ಲಿ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಕುರಿತು ಪ್ರಸ್ತಾಪಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**